ಹರಿಸುತ್ತೇವೆ. ಬೆಂಗಳೂರಿನಿಂದ ಒಂದು ಗಣಿಗಾರಿಕೆಯನ್ನು ಮಾಡುತ್ತಿದ್ದಾರೆಂದು ಹೇಳಿದ್ದಾರೆ. ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ, ಹೊರರಾಜ್ಯದ ಹಲವಾರು ಜನರು ಈ ವಿಷಯದಲ್ಲಿ ಪರವಾನಿಗೆಯನ್ನು ತೆಗೆದುಕೊಂಡಿರುವುದೇ ಒಂದು ಕಡೆ, ಆ ಪರವಾನಿಗೆಯ ಹೆಸರಿನಲ್ಲಿ ಬೇರೆ ಬೇರೆ ಜಾಗದಲ್ಲಿ ಯಾವ ಯಾವ ರೀತಿಯಾಗಿ ಗಣಿಗಾರಿಕೆ ನಡೆಯುತ್ತಿದೆ. ಅದರ ಬಗ್ಗೆ ಸಮಗ್ರವಾಗಿ ತನಿಖೆಯನ್ನು ನಡೆಸಿ ಇದಕ್ಕೆ ಸಂಪೂರ್ಣವಾದ ಅಂತ್ಯವನ್ನು ಕಾಣುವುದರ ಬಗ್ಗೆ ನಿರ್ಧಾರಗಳನ್ನು ಸರ್ಕಾರ ಮಾಡುವುದಕ್ಕೆ ತೀರ್ಮಾನವನ್ನು ಮಾಡುತ್ತೇವೆ.

3. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ : 21–03–2006ರ 1ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 42 ಪ್ರಶ್ನೆಗಳ ಪೈಕಿ 40 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಅನುಬಂಧ –1

4 ಸಭೆಯ ಮುಂದಿಡಲಾಗದ ಕಾಗದ ಪತ್ರಗಳು.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಕರ್ನಾಟಕ ಮಧ್ಯಮಾವದಿ ವಿತ್ತೀಯ ಯೋಜನೆ 2005–09 ರ ಪ್ರತಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಶ್ರೀ ಬಿ. ಎಸ್. ಯಡಿಯೂರಪ್ಪ (ಉಪಮುಖ್ಯ ಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಭಾರತ ಸಂವಿಧಾನ 151 (2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಿಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಕರ್ನಾಟಕ ಸರ್ಕಾರದ ದಿನಾಂಕ : 31ನೇ ಮಾರ್ಚಿ 2005ರ ಅಂತ್ಯದವರೆಗಿನ ವಾಣಿಜ್ಯ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

I. **ಶ್ರೀ ಹೆಚ್. ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿ)** : **ಮಾನ್ಯ ಅಧ್ಯಕ್ಷರು 1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ** :

1. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.